# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮ –2021

### ಪತ್ರಿಕಾ ಪ್ರಕಟಣೆ

ಆರೋಗ್ಯವೇ ಭಾಗ್ಯ, ಆರೋಗ್ಯವಂತ ಮಕ್ಕಳು ದೇಶದ ಸಂಪತ್ತು. ಪೋಲಿಯೊ ಒಂದು ಭಯಾನಕ ರೋಗ, ಈ ರೋಗ ಮಕ್ಕಳಲ್ಲಿ ಶಾಶ್ವತ ಅಂಗವಿಕಲತೆಯನ್ನು ಉಂಟುಮಾಡುತ್ತದೆ. ಈ ರೋಗ 5 ವರ್ಷದೊಳಗಿನ ಮಕ್ಕಳಲ್ಲಿ ಹೆಚ್ಚಾಗಿ ಕಂಡುಬರುತ್ತದೆ. ಭಾರತದಲ್ಲಿ 2011 ರಿಂದ ಯಾವುದೇ ಪೋಲಿಯೊ ಪ್ರಕರಣಗಳು ವರದಿಯಾಗಿರುವುದಿಲ್ಲ. ಭಾರತ ದೇಶವು ಪೋಲಿಯೊ ಮುಕ್ತ ರಾಷ್ಟ್ರ ಎಂದು 2014 ರಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಘೋಷಿಸಿದೆ. ಆದರೂ ಕೂಡ ಪಕ್ಕದ ನೆರೆಯ ದೇಶಗಳಾದ ಪಾಕಿಸ್ಥಾನ, ಆಫ್‌ಘಾನಿಸ್ಥಾನ ದೇಶಗಳಲ್ಲಿ 2020 ರಲ್ಲಿ 140 ಪ್ರಕರಣಗಳು ಕಂಡುಬಂದಿವೆ. ಈ ಹಿನ್ನೆಲೆಯಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಕೇಂದ್ರ ಮತ್ತು ರಾಜ್ಯಸರ್ಕಾರದ ಕೋವಿಡ್–19 ಮಾರ್ಗದರ್ಶನದಂತೆ, ಪಾಲಿಕೆಯ ಆರೋಗ್ಯ ಇಲಾಖೆಯಲ್ಲಿ ಪಲ್ಸ್ ಪೋಲಿಯೊ ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ಹಾಗೂ ಗುಣಾತ್ಮಕವಾಗಿ ನಡೆಸಲು ಅಂದರೆ ದಿನಾಂಕ: 31–01–2021 ರಿಂದ 03–02–2021 ರವರಿಗೆ ಹಮ್ಮಿಕೊಳ್ಳಲಾಗಿದೆ.

ಪಾಲಿಕೆಯು 198 ವಾರ್ಡುಗಳನ್ನು ಹೊಂದಿದ್ದು, ಪಾಲಿಕೆಯ ಆರೋಗ್ಯ ಇಲಾಖೆಯು ರಾಷ್ಟ್ರೀಯ ಪಲ್ಸ್ ಪೋಲಿಯೊ– 2021 ಕಾರ್ಯಕ್ರಮವನ್ನು ನಡೆಸಲು ಸಿದ್ಧತೆಯನ್ನು ಮಾಡಿಕೊಂಡಿದೆ.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ಮಾನ್ಯ ಆಡಳಿತಗಾರರು ಹಾಗೂ ಮಾನ್ಯ ಆಯುಕ್ತರು ರವರು ಉದ್ಘಾಟಿಸಲಿದ್ದು ಹಾಗೂ ಪಾಲಿಕೆಯ ಉನ್ನತ ಅಧಿಕಾರಿಗಳು, ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉನ್ನತ ಅಧಿಕಾರಿಗಳು, ರೋಟರಿ ಪದಾಧಿಕಾರಿಗಳು ಮತ್ತು ಪಾಲಿಕೆಯ ಕ್ಷೇತ್ರ ಸಿಬ್ಬಂದಿ ವರ್ಗದವರು, ಆಶಾ ಕಾರ್ಯಕರ್ತೆಯರು, ನರ್ಸಿಂಗ್ ವಿದ್ಯಾರ್ಥಿಗಳು, ಸಂಪರ್ಕ ಕಾರ್ಯಕರ್ತೆಯರು ಮತ್ತು ಇತರೆ ಸಂಘ–ಸಂಸ್ಥೆಯ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ.

ಪಾಲಿಕೆಯ ಸಾರ್ವಜನಿಕ ವಿಭಾಗದ ಅಡಿಯಲ್ಲಿ ಬರುವ 140 ಯೋಜನಾ ಘಟಕಗಳಲ್ಲಿ (ಯು.ಪಿ.ಹೆಚ್.ಸಿ) ದಿನಾಂಕ: 31–01–2021 ರಿಂದ 03–02–2021 ರವರಿಗೆ ನಡೆಯುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ರಾಷ್ಟ್ರೀಯ ಪಲ್ಸ್ ಪೋಲಿಯೋ–2021 ಕಾರ್ಯಕ್ರಮವನ್ನು ಬಿಬಿಎಂಪಿಯ 140 ಯೋಜನಾ ಘಟಕಗಳ, 198 ವಾರ್ಡುಗಳಲ್ಲಿ ಈ ಕೆಳಕಂಡಂತೆ ಕಾರ್ಯಕ್ರಮದ ಕ್ರಿಯಾ ಯೋಜನೆಯನ್ನು ರೂಪಿಸಲಾಗಿದೆ.

- ಒಟ್ಟು ಜನಸಂಖ್ಯೆ : 10445633
- ಒಟ್ಟು ಮನೆಗಳು : 2838822
- 0–5 ವರ್ಷ ಮಕ್ಕಳ ಸಂಖ್ಯೆ : 1084392
- ಕೊಳಚೆ ಪ್ರದೇಶಗಳ ಸಂಖ್ಯೆ : 960
- ಕೊಳಚೆ ಪ್ರದೇಶಗಳ ಮಕ್ಕಳ ಸಂಖ್ಯೆ(0–5) : 360712
- ವಲಸೆ ಜನಾಂಗದ ಪ್ರದೇಶಗಳು : 3995
- ವಲಸೆ ಜನಸಂಖ್ಯೆ : 197565

Scanned with CamScanner

- ವಲಸೆ ಜನಾಂಗದ ಮಕ್ಕಳ ಸಂಖ್ಯೆ(0–5) : 18507
- ಬೂತ್‌ಗಳ ಸಂಖ್ಯೆ : 3340
- ಸ್ಥಿರ ತಂಡಗಳು : 456
- ಸಂಚಾರಿ ತಂಡಗಳು : 324
- ಒಟ್ಟು ಲಸಿಕಾ ಕಾರ್ಯಕರ್ತರು : 14922
- ಒಟ್ಟು ಮೇಲ್ವಿಚಾರಕರು : 750

ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಾರ್ಡುಗಳಲ್ಲಿ ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕಲು ಬೂತ್‌ಗಳನ್ನು ಪಾಲಿಕೆಯ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ನಗರ ಕುಟುಂಬ ಕಲ್ಯಾಣ ಕೇಂದ್ರ, ಔಷಧಾಲಯಗಳು, ಅಂಗನವಾಡಿ ಕೇಂದ್ರಗಳು, ಶಾಲೆಗಳಲ್ಲಿ ಹಾಗೂ ಸ್ಥಿರ ಮತ್ತು ಸಂಚಾರಿ ತಂಡಗಳನ್ನು ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಸ್ವಯಂ ಸೇವಾ ಸಂಸ್ಥೆಯ ಆಸ್ಪತ್ರೆಗಳು, ಮಾಲ್‌ಗಳು, ಖಾಸಗಿ ನರ್ಸಿಂಗ್‌ಹೋಂಗಳು, ವೈದ್ಯಕೀಯ ಮಹಾವಿದ್ಯಾಲಯ, ಪ್ರಮುಖ ಉದ್ಯಾನವನಗಳು, ಮೆಟ್ರೋ ನಿಲ್ದಾಣ, ಕೊಳಚೆ ಪ್ರದೇಶಗಳಲ್ಲಿ ಇನ್ನು ಮುಂತಾದ ಪ್ರಮುಖ ಜನನಿಬಿಡ ಪ್ರದೇಶಗಳಲ್ಲಿ ಪಲ್ಸ್ ಪೋಲಿಯೊ ಬೂತ್‌ಗಳನ್ನು ಸ್ಥಾಪಿಸಲಾಗಿದೆ. ಈ ಬೂತ್‌ಗಳ ಮೇಲ್ವಿಚಾರಣೆ ಮಾಡಲು ಪಾಲಿಕೆಯಿಂದ 26 ವಿಶೇಷ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ.

ಅಲ್ಲದೇ, ಕಾರ್ಯಕ್ರಮದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಪಾಲಿಕೆಯೂ ದೂರದರ್ಶನ, ರೇಡಿಯೊ ಮತ್ತು ಪತ್ರಿಕೆಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಬ್ಯಾನರ್ಸ್, ಹೋರ್ಡಿಂಗ್ಸ್, ಧ್ವನಿವರ್ಧಕದ ಮೂಲಕ ಪ್ರಚಾರ, ಮನೆಮನೆಗೆ ಭೇಟಿ, ಬಿಬಿಎಂಪಿ ಅಂತರ್‌ಜಾಲದಲ್ಲಿ ವ್ಯಾಪಕ ಪ್ರಚಾರ ವ್ಯವಸ್ಥೆಯನ್ನು ಮಾಡಲಾಗಿದೆ. ಜೊತೆಗೆ ಪಾಲಿಕೆಯ ನಿಯಂತ್ರಣ ಕೊಠಡಿಯ ಮೂಲಕ ಮಾಹಿತಿಯನ್ನು ನೀಡುವ ವ್ಯವಸ್ಥೆಯನ್ನು ಮಾಡಲಾಗಿದೆ. ಪ್ರಮುಖವಾಗಿ ಬೆಂಗಳೂರು ಮಹಾನಗರದಲ್ಲಿ ಇರುವ ರೋಟರಿ ಸಂಸ್ಥೆಯು ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಕಾರ್ಯಕ್ರಮದ ಯಶಸ್ಸಿಗೆ ಸಹಕಾರ ಮತ್ತು ಸಹಾಯವನ್ನು ನೀಡಲಿದ್ದಾರೆ.

ಸಾರ್ವಜನಿಕರು ಈ ಹಿಂದೆ ಎಷ್ಟೇ ಬಾರಿ ಸಹ ಮಕ್ಕಳಿಗೆ ಪೋಲಿಯೊ ಹನಿ ಹಾಕಿಸಿದ್ದರೂ ಕೂಡ ಮೇಲೆ ತಿಳಿಸಿದ ದಿನಾಂಕದಂದು 5 ವರ್ಷದೊಳಗಿನ ಮಕ್ಕಳನ್ನು ಬೂತ್‌ಗೆ ಕರೆತಂದು ಎರಡು ಹನಿ ಪೋಲಿಯೊ ಹಾಕಿಸಿ, ಪೋಲಿಯೊ ಮುಕ್ತ ವಿಶ್ವವನ್ನಾಗಿ ಮಾಡೋಣವೆಂದು ಈ ಮೂಲಕ ಪಾಲಿಕೆಯು ವಿನಂತಿ ಮಾಡುತ್ತದೆ.

## "ಎರಡು ಹನಿ ಪೋಲಿಯೊ ಬಾಳಿನ ಜೇನ ಹನಿ"

Scanned with CamScanner